ತಂತಿ ವಿಳಾಸ: ಯೂನಿರೆಜ಼ಿ
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/92/2023-24 ದಿನಾಂಕ.07.01.2026

## ಸುತ್ತೋಲೆ

ವಿಷಯ: ವಾಕಥಾನ್ **'ನಮ್ಮ ನಡಿಗೆ ಆರೋಗ್ಯದ ಕಡೆಗೆ'** ಎಂಬ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ.

*****

ದಿನಾಂಕ 11ನೇ ಜನವರಿ 2026ರ ಭಾನುವಾರದಂದು ಬೆಳಿಗ್ಗೆ 06 ಗಂಟೆಯಿಂದ 8:30 ರವರೆಗೆ ಮೈಸೂರು ವಿಶ್ವವಿದ್ಯಾನಿಲಯ ಮತ್ತು ಜಿ.ಎಸ್.ಎಸ್.-ಸಿ.ಎಸ್.ಆರ್., ಮೈಸೂರು ಮಹಾ ನಗರ ಪಾಲಿಕೆ, ಮೈಸೂರು, ಜಿಮ್ ಅಸೋಸಿಯೇಶನ್ ಮತ್ತು ಇತರ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ **'ಫಿಟ್ ಮೈಸೂರು'** ಎಂಬ ಪರಿಕಲ್ಪನೆಯಡಿಯಲ್ಲಿ ವಾಕಥಾನ್-2026 **'ನಮ್ಮ ನಡಿಗೆ ಆರೋಗ್ಯದ ಕಡೆಗೆ'** ಎಂಬ ಧ್ಯೇಯ ವಾಕ್ಯದೊಂದಿಗೆ ಒಂದು ಗಂಟೆ ಅವಧಿಯ ನಡಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಈ ನಡಿಗೆ ಕಾರ್ಯಕ್ರಮದಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಹಾಗೂ ಇತರೆ ಅತಿಥಿ ಗಣ್ಯರು ಮತ್ತು ಮೈಸೂರಿನ ಹಲವು ಸಂಘಟನೆಗಳ ಗಣ್ಯರು ಭಾಗವಹಿಸಲಿದ್ದಾರೆ. ಶಾಲಾ ಕಾಲೇಜುಗಳ ವಿದ್ಯಾರ್ಥಿಗಳನ್ನು ಒಳಗೊಂಡಂತೆ ಸುಮಾರು 10 ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಈ ಹಿಂದೆ ಮೈಸೂರು ವಿಶ್ವವಿದ್ಯಾನಿಲಯ ನಮ್ಮ ರಾಷ್ಟ್ರಕವಿ ಕುವೆಂಪುರವರ ವಿರಚಿತ ನಾಡಗೀತೆಗೆ 100 ವರ್ಷ ಸಂದಿರುವ ಹಿನ್ನೆಲೆಯಲ್ಲಿ ಅಭೂತಪೂರ್ವ ಕಾರ್ಯಕ್ರಮವನ್ನ ಮೈಸೂರು ವಿಶ್ವವಿದ್ಯಾನಿಲಯ ಮತ್ತು ಅದರ ಅಂಗಸಂಸ್ಥೆಗಳು ಅಂದರೆ ಎಲ್ಲಾ ಕಾಲೇಜುಗಳು ಸೇರಿ ಒಂದು ದೊಡ್ಡ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿದ್ದು ಅದೇ ರೀತಿ ಮೈಸೂರು ವಿಶ್ವವಿದ್ಯಾನಿಲಯ ಮತ್ತು ಇತರ ಸಂಘ ಸಂಸ್ಥೆಗಳ ಸಹಭಾಗಿತ್ವದಲ್ಲಿ ಮತ್ತೊಂದು ವಿನೂತನ ಕಾರ್ಯಕ್ರಮವನ್ನು ದಿನಾಂಕ 11-01-2026ರಂದು **"ನಮ್ಮ ನಡಿಗೆ ಆರೋಗ್ಯದೆಡೆಗೆ"** ಎಂಬ ವಾಕಥಾನ್ ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ಮಾನಸಗಂಗೋತ್ರಿಯ ಬಯಲು ರಂಗಮಂದಿರದಿಂದ ಬೆಳಿಗ್ಗೆ 6:00 ಗಂಟೆಗೆ ಪ್ರಾರಂಭವಾಗಿ ಕುಕ್ಕರಹಳ್ಳಿಕೆರೆ ಪಶ್ಚಿಮ ದ್ವಾರ, ಬೋಗಾಧಿ ರಸ್ತೆ, ಅಗ್ನಿಶಾಮಕ ವೃತ್ತ, ಮಹಾರಾಜ ಕಾಲೇಜು ಮೈದಾನ ವೃತ್ತ, ಕ್ರಾಫರ್ಡ್ ಭವನ, ಹುಣಸೂರು ರಸ್ತೆ ಮಾರ್ಗವಾಗಿ ಪಡುವಾರಹಳ್ಳಿ ವೃತ್ತದಿಂದ ವಾಪಸ್ಸು ಮಾನಸಗಂಗೋತ್ರಿಯ ಸೆನೆಟ್ ಭವನ ಸಮೀಪ ಮುಕ್ತಾಯಗೊಳ್ಳುತ್ತದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಲಘು ಉಪಹಾರ ಹಾಗೂ ಒಂದು ಟೋಪಿ (Hat)ಅನ್ನು ನೀಡುವ ವ್ಯವಸ್ಥೆ ಮಾಡಲಾಗಿದೆ. ಮೈಸೂರು ವಿಶ್ವವಿದ್ಯಾನಿಲಯದ ಅಧ್ಯಾಪಕರು/ಅತಿಥಿ ಉಪನ್ಯಾಸಕರು/ಅಧ್ಯಾಪಕೇತರರು/ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಕಡ್ಡಾಯವಾಗಿ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ತಿಳಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಸಂಬಂಧಪಟ್ಟ ಮಾಹಿತಿಯನ್ನು ಲಗತ್ತಿಸಲಾಗಿದೆ.

7/1/2026
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು- **ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
8. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈ.ವಿ.ವಿ., ಮೈಸೂರು.
9. ಕಛೇರಿ ಪ್ರತಿ.